# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 691 |
| ಸದಸ್ಯರ ಹೆಸರು | : ಶ್ರೀ ಎನ್ ರವಿಕುಮಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 21.02.2024. |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸರ್ಕಾರಿ ಜಮೀನನ್ನು ಮಂಜೂರು ಮಾಡಲು ಇರುವ ನಿಯಮಗಳೇನು: ಯಾರಿಗೆ ಯಾವ ಕಾರಣಕ್ಕಾಗಿ ಸರ್ಕಾರಿ ಜಮೀನನ್ನು ಮಂಜೂರು ಮಾಡಬಹುದಾಗಿದೆ. (ವಿವರ ನೀಡುವುದು)</td><td>ಸರ್ಕಾರಿ ಜಮೀನನ್ನು ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969 ರಡಿಯಲ್ಲಿ ಕೈಗಾರಿಕೆ, ಶಿಕ್ಷಣ, ಕಲ್ಯಾಣ ಚಟುವಟಿಕೆಗಳು, ಧಾರ್ಮಿಕ, ಬೇಸಾಯ, ಕೃಷಿಯೇತರ ಉದ್ದೇಶಗಳಿಗಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.</td></tr>
<tr><td>ಆ)</td><td>ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಸಬಾ ಹೋಬಳಿ ಗೊಬ್ಬರಗುಂಟೆ ಗ್ರಾಮದ ಸ.ನಂ 64ರಲ್ಲಿನ ಜಮೀನನ್ನು ಯಾರಿಗೆ ಹಂಚಿಕೆ ಮಾಡಲಾಗಿದೆ: ಫಲಾನುಭವಿಗಳ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು.</td><td>ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಸಬಾ ಹೋಬಳಿ ಗೊಬ್ಬರಗುಂಟೆ ಗ್ರಾಮದ ಸ.ನಂ 64ರಲ್ಲಿ ಹಂಚಿಕೆ ಮಾಡಿರುವ ವಿವರ.<br><table>
<tr><th>ಕ್ರಮ ಸಂ</th><th>ವಿವರ</th><th>ವಿಸ್ತೀರ್ಣ ಎ/ಗು</th></tr>
<tr><td>1</td><td>ಆಶ್ರಯ ಯೋಜನೆಗಾಗಿ ಕಾಯ್ದಿರಿಸಲಾಗಿರುತ್ತದೆ.</td><td>4-29.12</td></tr>
<tr><td>2</td><td>94 ಸಿ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಲಾಗಿರುತ್ತದೆ.</td><td>0-10.04</td></tr>
<tr><td>3</td><td>ಕರ್ನಾಟಕ ರಾಜ್ಯ ಬ್ಯಾಸ್ಕೆಟ್‌ಬಾಲ್ ಅಸೋಷಿಯೇಷನ್, ಬೆಂಗಳೂರು ರವರಿಗೆ ಮಂಜೂರು ಮಾಡಲಾಗಿರುತ್ತದೆ.</td><td>5-00</td></tr>
</table></td></tr>
</table>

| | | |
|---|---|---|
| ಇ) | ಕರ್ನಾಟಕ ಬಾಸ್ಕೆಟ್‌ಬಾಲ್ ಅಸೋಷಿಯೇಷನ್ ಸಂಸ್ಥೆಗೆ ಯಾವ ನಿಯಮಗಳನ್ವಯ ಜಮೀನು ಮಂಜೂರು ಮಾಡಲಾಗಿದೆ: ನಿಯಮಗಳೊಂದಿಗೆ ಮಂಜೂರಾತಿ ಆದೇಶದ ಪ್ರತಿಯನ್ನು ಒದಗಿಸುವುದು. | ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27ರಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಪ್ರಸ್ತಾಪಿತ ಜಮೀನಿನ ಪ್ರಚಲಿತ ಕೃಷಿಯೇತರ ಮಾರ್ಗಸೂಚಿ ಮೌಲ್ಯದ ಶೇಕಡಾ 10ರಷ್ಟು ಮತ್ತು ಇನ್ನಿತರ ಶಾಸನಬದ್ದ ಶುಲ್ಕಗಳನ್ನು ವಿಧಿಸಿ, ಕರ್ನಾಟಕ ರಾಜ್ಯ ಬ್ಯಾಸ್ಕೆಟ್‌ಬಾಲ್ ಅಸೋಷಿಯೇಷನ್‌ರವರಿಗೆ ಜಮೀನು ಮಂಜೂರು ಮಾಡಲಾಗಿರುತ್ತದೆ. (ಆದೇಶದ ಪ್ರತಿಯನ್ನು ಅನುಬಂಧ ದಲ್ಲಿ ನೀಡಲಾಗಿದೆ) |
| ಈ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಸಬಾ ಹೋಬಳಿ ಗೊಬ್ಬರಗುಂಟೆ ಗ್ರಾಮದ ಸ.ನಂ 64ರ ಜಮೀನಿಗೆ ಪ್ರತೀ ಎಕರೆಗೆ ಸರ್ಕಾರ ನಿಗಧಿಪಡಿಸಿದ ದರವೆಷ್ಟು: ಮಾರುಕಟ್ಟೆ ದರವೆಷ್ಟು: ಸರ್ಕಾರವು ಕರ್ನಾಟಕ ಬಾಸ್ಕೆಟ್‌ಬಾಲ್ ಅಸೋಷಿಯೇಷನ್ ಸಂಸ್ಥೆಗೆ ಜಮೀನು ಮಂಜೂರು ಮಾಡಲು ನಿಗದಿಪಡಿಸಿದ ಮೊತ್ತವೆಷ್ಟು? (ವಿವರ ನೀಡುವುದು) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಕಸಬಾ ಹೋಬಳಿ ಗೊಬ್ಬರಗುಂಟೆ ಗ್ರಾಮದ ಸ.ನಂ 64ರ ಜಮೀನಿಗೆ ಪ್ರತಿ ಎಕರೆಗೆ ಜಮೀನಿಗೆ ರೂ. 25,00,000/- ಗಳನ್ನು ನಿಗದಿಪಡಿಸಲಾಗಿರುತ್ತದೆ. ಪ್ರತಿ ಎಕರೆ ಜಮೀನಿಗೆ ಕೃಷಿಯೇತರ ಮಾರುಕಟ್ಟೆ ಮೌಲ್ಯ ರೂ. 45,00,000/- .<br><br>ಅದರಂತೆ, ಕರ್ನಾಟಕ ಬಾಸ್ಕೆಟ್‌ಬಾಲ್ ಅಸೋಷಿಯೇಷನ್ ಸಂಸ್ಥೆಗೆ ಮಂಜೂರು ಮಾಡಿರುವ ಜಮೀನಿಗೆ ಕೃಷಿಯೇತರ ಮಾರುಕಟ್ಟೆ ಮೌಲ್ಯ ರೂ. 45,00,000/- ಗಳಿಗೆ ಶೇಕಡಾ 10 ರಷ್ಟು ಅಂದರೆ 4,50,000/-ಗಳಂತೆ ರೂ. 22,50,000/-ಗಳನ್ನು ಪೋಡಿ ಶುಲ್ಕ ರೂ.2,300/-ಗಳನ್ನು ನಿಗದಿಪಡಿಸಲಾಗಿರುತ್ತದೆ. |

ಸಂಖ್ಯೆ: ಆರ್‌ಡಿ 16 ಎಲ್‌ಜಿಕ್ಯೂ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ ಗೊಬ್ಬರಗುಂಟೆ ಗ್ರಾಮದ ಸ.ನಂ.64 ರಲ್ಲಿ 5-00 ಎಕರೆ ಜಮೀನನ್ನು ಕರ್ನಾಟಕ ರಾಜ್ಯ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಇವರಿಗೆ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:**

1. ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆರವರ ಪತ್ರ ಸಂಖ್ಯೆ:ಎಲ್‌ಎನ್‌ಡಿ(ದೇ)ಸಿಆರ್:84/21-22 ದಿನಾಂಕ:31.08.2021
2. ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆರವರ ಪತ್ರ ಸಂಖ್ಯೆ:ಎಲ್‌ಎನ್‌ಡಿ(ದೇ):ಸಿಆರ್:84/21-22, ದಿನಾಂಕ:16.09.2022
3. ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗರವರ ಪತ್ರ ಸಂಖ್ಯೆ:ಆರ್ ಸಿ ಬಿ/ಎಲ್ ಎನ್ ಡಿ /ಸಿಆರ್ /37/2022 ದಿನಾಂಕ:23.09.2022.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ.(1) ರ ಪತ್ರದಲ್ಲಿ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪತ್ರದಲ್ಲಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಸಂಸ್ಥೆ ಇವರು ಹಿಂದಿನ ಸನ್ಮಾನ್ಯ ಮುಖ್ಯಮಂತ್ರಿಯವರಿಗೆ ಸಲ್ಲಿಸಿರುವ ಮನವಿಯಲ್ಲಿ ಕರ್ನಾಟಕ ರಾಜ್ಯ ಬಾಸ್ಕೆಟ್ ಬಾಲ್ ಸಂಸ್ಥೆಗೆ ಬಾಸ್ಕೆಟ್ ಬಾಲ್ ಅಕಾಡೆಮಿ ಸ್ಥಾಪಿಸಲು ಸೂಕ್ತ ಸ್ಥಳವೊಂದನ್ನು ಹಂಚಿಕೆ ಮಾಡಲು ಕೋರಿರುತ್ತಾರೆ. ಆದರಂತೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಗೊಬ್ಬರಗುಂಟೆ ಗ್ರಾಮದ ಸ.ನಂ.64 ರಲ್ಲಿ 19-34 ಎಕರೆ/ಗುಂಟೆ "ಎ" ಖರಾಬು 0-20 ಗುಂಟೆ ಜಾತಾ 19-14 ಎಕರೆ/ಗುಂಟೆ ಸರ್ಕಾರಿ ಬೀಳು ಜಮೀನಿದ್ದು, ಈ ಪೈಕಿ 4-29.12 ಎಕರೆ/ಗುಂಟೆ ಜಮೀನನ್ನು ವ್ಯವಸ್ಥಾಪಕ ನಿರ್ದೇಶಕರು, ರಾಜೀವ್‌ಗಾಂಧಿ ವಸತಿ ನಿಗಮ ಬೆಂಗಳೂರು ಇವರಿಗೆ ಮಂಜೂರಾಗಿದ್ದು, 94ಸಿ ಅರ್ಜಿಗಳ ಫಲಾನುಭವಿಗಳಿಗೆ 0-10.04 ಗುಂಟೆ ಜಮೀನಿನಲ್ಲಿ ಹಕ್ಕು ಪತ್ರ ನೀಡಲಾಗಿರುತ್ತದೆ. ಈ ಪೈಕಿ ಭೂ ಮಾಪಕರು 5-00 ಎಕರೆ ಜಮೀನನ್ನು ಮಂಜೂರು ಮಾಡಲು ನಕ್ಷೆಯಲ್ಲಿ ಗುರ್ತಿಸಿರುತ್ತಾರೆ. ಕೋರಿಕೆ ಸಂಸ್ಥೆಯು ನೊಂದಣಿ ಪ್ರಮಾಣ ಪತ್ರ ಹಾಗೂ ಐದು ವರ್ಷಗಳ ಆಡಿಟ್ ವರದಿ ಸಲ್ಲಿಸಿರುತ್ತಾರೆ ಪ್ರಸ್ತಾಪಿತ ಜಮೀನು ರಾಷ್ಟ್ರೀಯ ಹೆದ್ದಾರಿ 7 ರ ರಸ್ತೆಯಿಂದ ಸುಮಾರು 1.5 ಕಿ.ಮೀ. ರಿಂದ 2 ಕಿ.ಮೀ ಅಂತರದಲ್ಲಿದ್ದು, ಸದರಿ ಜಮೀನಿಗೆ ಓಡಾಡಲು ನಕ್ಷೆಯಲ್ಲಿ ಕಂಡಂತೆ ರಸ್ತೆ ಇರುವುದಿಲ್ಲ. ಆದರೆ ರೂಢಿ ರಸ್ತೆಯಲ್ಲಿ ಹಿಡುವಳಿ, ಗೋಮಾಳ ಮತ್ತು ಅರಣ್ಯ ಇಲಾಖೆಯ ಜಮೀನಿನ ಮೂಲಕ ಹಾದು ಹೋಗುತ್ತಿರುತ್ತದೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(2) ರ ದಿನಾಂಕ:16.09.2022 ರ ಪತ್ರದಲ್ಲಿ ಪ್ರಸ್ತಾಪಿತ ಜಮೀನಿನ ಗಣಕೀಕೃತ ಪಹಣಿಯಲ್ಲಿ ಹುಚ್ಚಪ್ಪ ಬಿನ್ ನಂಜಪ್ಪ ರವರ ಹೆಸರು ಅಕ್ರಮವಾಗಿ ದಾಖಲಾಗಿರುವ

ಹಿನ್ನೆಲೆಯಲ್ಲಿ, ಕ್ರಿಮಿನಲ್ ಮೊಕ್ಕದ್ದಮೆ ದಾಖಲಾಗಿದ್ದು, ವಿಚಾರಣೆ ಹಂತದಲ್ಲಿದೆ. ವಿಚಾರಣೆ ನಂತರ ಆರೋಪ ಸಾಬೀತಾದರೆ ಅಪರಾಧಿಗೆ ಶಿಕ್ಷೆಗೊಳಪಡಿಸಲಾಗುವುದೇ ಹೊರತು ದಾಖಲೆಗಳಲ್ಲಿ ಯಾವುದೇ ರೀತಿಯ ಬದಲಾವಣೆಯಾಗುವುದಿಲ್ಲ. ಆದ್ದರಿಂದ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಗೊಬ್ಬರಗುಂಟೆ ಗ್ರಾಮದ ಸ.ನಂ.64 ರಲ್ಲಿನ 5-00 ಎಕರೆ ಜಮೀನನ್ನು ಕರ್ನಾಟಕ ಸ್ಟೇಟ್ ಬಾಸ್ಕೆಟ್ ಬಾಲ್ ಅಸೋಸಿಯೇಷನ್ (ರಿ) ಇವರಿಗೆ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ

ಮೇಲೆ ಓದಲಾದ ಕ್ರ.ಸಂ.(3) ರ ದಿನಾಂಕ:23.09.2022 ರ ಪತ್ರದಲ್ಲಿ ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಗೊಬ್ಬರಗುಂಟೆ ಗ್ರಾಮದ ಸ.ನಂ.64 ರಲ್ಲಿನ 5-00 ಎಕರೆ ಜಮೀನನ್ನು ಕರ್ನಾಟಕ ಸ್ಟೇಟ್ ಬಾಸ್ಕೆಟ್ ಬಾಲ್ ಅಸೋಸಿಯೇಷನ್ (ರಿ) ಇವರಿಗೆ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ, ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಮತ್ತು ಜಿಲ್ಲಾಧಿಕಾರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ಆರ್‌ಡಿ 225 ಎಲ್‌ಜಿಬಿ 2021**
**ಬೆಂಗಳೂರು ದಿನಾಂಕ:30.08.2023**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಕಸಬಾ ಹೋಬಳಿ, ಗೊಬ್ಬರಗುಂಟೆ ಗ್ರಾಮದ ಸ.ನಂ.64 ರಲ್ಲಿ 5-00 ಎಕರೆ ಸರ್ಕಾರಿ ಬೀಳು ಜಮೀನನ್ನು ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27 ರಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಪ್ರಸ್ತಾಪಿತ ಜಮೀನಿನ ಪ್ರಚಲಿತ ಕೃಷಿಯೇತರ ಮಾರ್ಗಸೂಚಿ ಮೌಲ್ಯದ ಶೇಕಡಾ 10 ರಷ್ಟು ಮತ್ತು ಇನ್ನಿತರೆ ಶಾಸನಬದ್ಧ ಶುಲ್ಕಗಳನ್ನು ವಿಧಿಸಿ, ಬಾಸ್ಕೆಟ್ ಬಾಲ್ ಅಕಾಡೆಮಿ ಸ್ಥಾಪಿಸಿ, ಬಾಸ್ಕೆಟ್ ಬಾಲ್ ಆಟಗಾರರಿಗೆ ಉನ್ನತ ಮಟ್ಟದ ತರಬೇತಿ ನೀಡುವುದಕ್ಕಾಗಿ ಕರ್ನಾಟಕ ರಾಜ್ಯ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಮಂಜೂರು ಮಾಡಿ ಸರ್ಕಾರವು ಆದೇಶಿಸಿದೆ

**ಷರತ್ತುಗಳು:-**

1. ಮಂಜೂರಾದ ಜಮೀನು ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಎರಡು ವರ್ಷಗಳ ಅವಧಿಯೊಳಗೆ ಉಪಯೋಗಿಸತಕ್ಕದ್ದು;
2. ಸಂಸ್ಥೆಗೆ ಸದರಿ ಜಮೀನು ಅವಶ್ಯವಿಲ್ಲವೆಂದು ಕಂಡು ಬಂದಲ್ಲಿ ಕಂದಾಯ ಇಲಾಖೆಗೆ ಹಿಂದಿರುಗಿಸತಕ್ಕದ್ದು;

Vindumas
30/8/23

3 ಮಂಜೂರಾದ ಜಮೀನನ್ನು ವಿನಾಶಕಾರಿಯಾದ ಅಥವಾ ಖಾಯಂ ಆಗಿ ಹಾನಿಕಾರಕವಾಗುವ ರೀತಿಯಲ್ಲಿ ಬಳಸತಕ್ಕದ್ದಲ್ಲ ಹಾಗೂ ಯಾವುದೇ ರೀತಿಯ ಅತಿಕ್ರಮಣವಾಗದಂತೆ ಕ್ರಮವಹಿಸತಕ್ಕದ್ದು;

4 ಮಂಜೂರಾದ ಜಮೀನನ್ನು ಕಂದಾಯ ಇಲಾಖೆಯ ಅನುಮತಿ ಇಲ್ಲದೆ ಮಾರಾಟ ಮಾಡುವುದಾಗಲೀ, ಗುತ್ತಿಗೆ/ಉಪಗುತ್ತಿಗೆ ನೀಡುವುದಾಗಲೀ, ಅಡಮಾನ, ವರ್ಗಾವಣೆ, ದಾನ, ಇತರೆ ಯಾವುದೇ ರೀತಿಯ ಪರಭಾರೆಯನ್ನು ಮಾಡಬಾರದು;

5 ಮಂಜೂರಾದ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ಶಾಸನಬದ್ಧವಾಗಿ ಪಡೆಯಬೇಕಾದ ಪರವಾನಗಿಗಳನ್ನು ಸಂಬಂಧಿತ ಪ್ರಾಧಿಕಾರಗಳಿಂದ ಪಡೆಯತಕ್ಕದ್ದು ಹಾಗೂ ನಿಯಾಮಾನುಸಾರ ಪಾವತಿಸಬೇಕಾದ ಎಲ್ಲಾ ರೀತಿಯ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು;

6 ಮಂಜೂರಾತಿ ಜಮೀನಿನ ಮೇಲೆ ಯಾವುದೇ ನ್ಯಾಯಾಲಯದಲ್ಲಿ ದಾವೆ ದಾಖಲಾಗಿದ್ದರೆ ಈ ಮಂಜೂರಾತಿಯು ನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ;

7 ಮಂಜೂರಾದ ಜಮೀನಿನ ಯಾವುದೇ ಭಾಗವು ಸಾರ್ವಜನಿಕ ಉದ್ದೇಶಕ್ಕೆ ಅಗತ್ಯವಾಗಿದ್ದಲ್ಲಿ, ಸರ್ಕಾರವು ಸದರಿ ಜಮೀನನ್ನು ಪರಿಹಾರ ನೀಡದೇ ಹಿಂತೆಗೆದುಕೊಳ್ಳುವ ಹಕ್ಕನ್ನು ಹೊಂದಿರುತ್ತದೆ;

8 ಮಂಜೂರಾದ ಜಮೀನು 1969 ರ ಕರ್ನಾಟಕ ಭೂ ಮಂಜೂರಾತಿ ನಿಯಮಗಳಿಗೆ ಬದ್ಧವಾಗಿರತಕ್ಕದ್ದು. ಸದರಿ ನಿಯಮಗಳ ಉಲ್ಲಂಘನೆಯಾದಲ್ಲಿ ಈ ಮಂಜೂರಾತಿ ಆದೇಶ ತನ್ನಷ್ಟಕ್ಕೆ ತಾನೇ ರದ್ದಾಗುವುದು ಹಾಗೂ ಯಾವುದೇ ಪರಿಹಾರ ನೀಡದೇ ಮಂಜೂರಾದ ಭೂಮಿಯನ್ನು ಸರ್ಕಾರದ ವಶಕ್ಕೆ ಪಡೆಯಲಾಗುವುದು;

9 ಮಂಜೂರಾದ ಜಮೀನನ್ನು ಹಸ್ತಾಂತರಿಸುವಾಗ ಜಮೀನಿನ ವಾಸ್ತವ ಪರಿಸ್ಥಿತಿಗಳನ್ನು ಗಮನದಲ್ಲಿರಿಸಿಕೊಂಡು ಜಿಲ್ಲಾಧಿಕಾರಿಗಳು ಪೂರಕವಾದ ಷರತ್ತುಗಳನ್ನು ವಿಧಿಸಬಹುದಾಗಿದೆ;

ಈ ಆದೇಶವನ್ನು ದಿನಾಂಕ:19.08.2023 ರಂದು ಜರುಗಿದ ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ: 429/2023 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ವಿಮಲಮ್ಮ.ಸಿ)** 30/8/23
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಮಂಜೂರಾತಿ-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ರವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಸರ್ಕಾರಕ್ಕೆ ಹಾಗೂ ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆರವರಿಗೆ ಕಳುಹಿಸಲು ಕೋರಿದೆ.

**ರವರಿಗೆ**

1. ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2 ) ಕರ್ನಾಟಕ ಬೆಂಗಳೂರು.
2. ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ,

3. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಬ್ಬಂಧಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು.(ಪ್ರಕರಣ ಸಂಖ್ಯೆ:ಸಿ:429/2023).
4. ಸರ್ಕಾರದ ಅಪರ ಕಾರ್ಯದರ್ಶಿ-1, ಕಾನೂನು ಇಲಾಖೆ ವಿಧಾನಸೌಧ,ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-7) ವಿಧಾನಸೌಧ,ಬೆಂಗಳೂರು.
6. ಉಪವಿಭಾಗಾಧಿಕಾರಿಗಳು, ದೊಡ್ಡಬಳ್ಳಾಪುರ ಉಪವಿಭಾಗ, ದೊಡ್ಡಬಳ್ಳಾಪುರ.
7. ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, ದೇವನಹಳ್ಳಿ.
8. Karnataka State Basketball Association(R). Karnataka Olympic Bhavan,Sree Kanteerava Indoor StadiumComplex, Bangalore-560 001.
9. ಶಾಖಾ ರಕ್ಷಾ, ಕಡತ/ ಹೆಚ್ಚುವರಿ ಪ್ರತಿ

**ಪ್ರತಿಯನ್ನು ಮಾಹಿತಿಗಾಗಿ**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ,(ಭೂ ಮಂಜೂರಾತಿ) ಬಹುಮಹಡಿಗಳ ಕಟ್ಟಡ, ಬೆಂಗಳೂರು.